सत्यमेव जयते

# ರಾಜ್ಯ ಚುನಾವಣಾ ಆಯೋಗ, ಕರ್ನಾಟಕ

ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಂಡಳಿ ಕಟ್ಟಡ (ಹಿಂಭಾಗ), 1ನೇ ಮಹಡಿ, ನಂ.8, ಕನ್ನಿಂಗ್‌ಹ್ಯಾಂ ರಸ್ತೆ, ಬೆಂಗಳೂರು-52.

**ನಂ: ರಾಚುಆ:30:ಇಯುಬಿ:2018 ದಿನಾಂಕ: 09-08-2018**

## ಪತ್ರಿಕಾ ಪ್ರಕಟಣೆ

ರಾಜ್ಯ ಚುನಾವಣಾ ಆಯೋಗವು 2013 ರಲ್ಲಿ ಮೈಸೂರು ಮಹಾನಗರಪಾಲಿಕೆ, ತುಮಕೂರು ನಗರಸಭೆ ಮತ್ತು ಶಿವಮೊಗ್ಗ ನಗರಸಭೆಗಳ ಸಾರ್ವತ್ರಿಕ ಚುನಾವಣೆಯನ್ನು ನಡೆಸಲಾಗಿತ್ತು. ಇವುಗಳ ಅವಧಿಯು ಕ್ರಮವಾಗಿ 04-09-2018, 16-09-2018 ಮತ್ತು 12-11-2018 ರಂದು ಮುಕ್ತಾಯವಾಗುತ್ತಿದೆ. ತುಮಕೂರು ನಗರಸಭೆ ಮತ್ತು ಶಿವಮೊಗ್ಗ ನಗರಸಭೆಯನ್ನು ಸರ್ಕಾರವು ಮಾಹಾನಗರ ಪಾಲಿಕೆಗಳಾಗಿ ಉನ್ನತೀಕರಿಸಿದೆ.

ಈ ಮೇಲ್ಕಂಡ ಮೂರು ಮಹಾನಗರ ಪಾಲಿಕೆಗಳಿಗೆ 2011ರ ಜನಗಣತಿಯಂತೆ ಸರ್ಕಾರವು ಕ್ಷೇತ್ರ ಪುನರ್ ವಿಂಗಡಣೆ ಮಾಡಿ, ವಾರ್ಡವಾರು ಮೀಸಲಾತಿಯನ್ನು ನಿಗದಿಪಡಿಸಿ ಅಧಿಸೂಚಿಸಿ ರಾಜ್ಯ ಪತ್ರದಲ್ಲಿ ಪ್ರಕಟಿಸಿದೆ.

ಮೇಲ್ಕಂಡ ಮೂರು ಮಹಾನಗರ ಪಾಲಿಕೆಗಳಿಗೆ ಚುನಾವಣೆ ನಡೆಸಲು ಎಲ್ಲಾ ಪೂರ್ವಸಿದ್ಧತೆಗಳನ್ನು ಮಾಡಿಕೊಂಡಿದ್ದು, ವಾರ್ಡುವಾರು ಮತದಾರರ ಪಟ್ಟಿಯನ್ನು ದಿನಾಂಕ: 27.06.2018 ರಂದು ಸಂಬಂಧಿಸಿದ ಜಿಲ್ಲಾಧಿಕಾರಿಗಳು ಪ್ರಕಟಪಡಿಸಿರುತ್ತಾರೆ. ಅಂತಿಮ ವಾರ್ಡ್‌ವಾರು ಮೀಸಲಾತಿಯನ್ನು ಆಯೋಗದ ವೆಬ್ ಸೈಟ್ www.karsec.gov.in ಪ್ರಚುರಪಡಿಸಲಾಗಿದೆ ಹಾಗೂ ಈ ಬಗ್ಗೆ ವ್ಯಾಪಕ ಪ್ರಚಾರ ನೀಡುವಂತೆ ಜಿಲ್ಲಾಧಿಕಾರಿಗೆ ಸೂಚಿಸಿದೆ.

ಸರ್ಕಾರವು ದಿನಾಂಕ: 19-07-2018 ಅಂತಿಮ ವಾರ್ಡುವಾರು ಮೀಸಲಾತಿ ಅಧಿಸೂಚನೆಯನ್ನು ಹೊರಡಿಸಿರುವುದರಿಂದ ಹಾಗೂ ಈ ಮಹಾನಗರ ಪಾಲಿಕೆಗಳಿಗೆ ಸಂಬಂಧಿಸಿದ ಕ್ಷೇತ್ರ ವಿಂಗಡಣೆ ಮತ್ತು ಮೀಸಲಾತಿಯನ್ನು ಪ್ರಶ್ನಿಸಿ ಮಾನ್ಯ ಉಚ್ಚನ್ಯಾಯಾಲಯ ಬೆಂಗಳೂರು ಇಲ್ಲಿ ದಾಖಲಾಗಿದ್ದ ಪ್ರಕರಣವು ಇತ್ಯರ್ಥವಾಗಿರುವುದರಿಂದ ಆಯೋಗವು ***ಕರ್ನಾಟಕ ಪೌರನಿಗಮ (ಚುನಾವಣಾ) ನಿಯಮಗಳು, 1979ರ ನಿಯಮ 3(1) ರಲ್ಲಿ*** ರಾಜ್ಯ ಚುನಾವಣಾ ಆಯೋಗಕ್ಕೆ ದತ್ತವಾಗಿರುವ ಅಧಿಕಾರದ ಮೇರೆಗೆ, ಮೈಸೂರು, ತುಮಕೂರು ಹಾಗೂ ಶಿವಮೊಗ್ಗ ಮಹಾನಗರಪಾಲಿಕೆಗಳಿಗೆ ಸಾರ್ವತ್ರಿಕ ಚುನಾವಣೆ ನಡೆಸಲು ಈ ಕೆಳಕಂಡ ವೇಳಾಪಟ್ಟಿಯನ್ನು ಪ್ರಕಟಿಸಿದೆ.

### ಚುನಾವಣಾ ವೇಳಾ ಪಟ್ಟಿ

| | | |
|---|---|---|
| 1 | ಜಿಲ್ಲಾಧಿಕಾರಿಗಳು ಚುನಾವಣಾ ಅಧಿಸೂಚನೆಯನ್ನು ಹೊರಡಿಸುವ ದಿನಾಂಕ ಮತ್ತು ದಿನ | 13-08-2018 (ಸೋಮವಾರ) |
| 2 | ನಾಮಪತ್ರಗಳನ್ನು ಸಲ್ಲಿಸಲು ಕೊನೆಯ ದಿನಾಂಕ ಮತ್ತು ದಿನ | 20-08-2018 (ಸೋಮವಾರ) |
| 3 | ನಾಮಪತ್ರಗಳನ್ನು ಪರಿಶೀಲಿಸುವ ದಿನಾಂಕ ಮತ್ತು ದಿನ | 21-08-2018 (ಮಂಗಳವಾರ) |
| 4 | ಉಮೇದುವಾರಿಕೆಗಳನ್ನು ಹಿಂತೆಗೆದುಕೊಳ್ಳಲು ಕೊನೆಯ ದಿನಾಂಕ ಮತ್ತು ದಿನ | 23-08-2018 (ಗುರುವಾರ) |
| 5 | ಮತದಾನ ಅವಶ್ಯವಿದ್ದರೆ, ಮತದಾನವನ್ನು ನಡೆಸ ಬೇಕಾದ ದಿನಾಂಕ ಮತ್ತು ದಿನ (ಸಮಯ ಬೆಳಿಗ್ಗೆ 7.00 ಘಂಟೆಯಿಂದ ಸಾಯಂಕಾಲ 5.00 ಘಂಟೆವರೆಗೆ) | **31-08-2018** (ಶುಕ್ರವಾರ) |

| | | |
|---|---|---|
| 6 | ಮರು ಮತದಾನ ಇದ್ದಲ್ಲಿ ಮತದಾನದ ಸಮಯ ಬೆಳಿಗ್ಗೆ 7.00 ಘಂಟೆಯಿಂದ ಸಾಯಂಕಾಲ 5.00 ಘಂಟೆವರೆಗೆ | 02-09-2018 (ಭಾನುವಾರ) |
| 7 | ಮತಗಳ ಎಣಿಕೆಯ ದಿನಾಂಕ ಮತ್ತು ದಿನ ಬೆಳಿಗ್ಗೆ 8.00 ಘಂಟೆಯಿಂದ ಕೇಂದ್ರ ಸ್ಥಾನದಲ್ಲಿ | 03-09-2018 (ಸೋಮವಾರ) |
| 8 | ಚುನಾವಣೆಯನ್ನು ಯಾವ ದಿನಾಂಕಕ್ಕೆ ಮುಂಚೆ ಮುಕ್ತಾಯಗೊಳಿಸಬೇಕೋ ಆ ದಿನಾಂಕ ಮತ್ತು ದಿನ | 03-09-2018 (ಸೋಮವಾರ) |

**ಸದಾಚಾರ ಸಂಹಿತೆಯು ತಕ್ಷಣದಿಂದ ಜಾರಿಗೆ ಬರುತ್ತದೆ ಹಾಗೂ ದಿನಾಂಕ: 03-09-2018 ರ ವರೆಗೆ ಆಯಾ ಮಹಾನಗರಪಾಲಿಕೆಯ ವ್ಯಾಪ್ತಿಯಲ್ಲಿ ಜಾರಿಯಲ್ಲಿರುತ್ತದೆ.**

**ಚುನಾವಣಾ ಸಂಬಂಧಿಸಿದ ಅಂಕಿ-ಅಂಶಗಳು ಈ ಕೆಳಕಂಡಂತಿದೆ**

| ಕ್ರ. ಸಂ. | ನಗರ ಸ್ಥಳೀಯ ಸಂಸ್ಥೆಗಳು | ವಾರ್ಡ್‌ಗಳ ಸಂಖ್ಯೆ | ಮತಗಟ್ಟೆಗಳ ಸಂಖ್ಯೆ | ಪುರುಷರು | ಮಹಿಳೆಯರು | ಇತರೆ | ಒಟ್ಟು |
|---|---|---|---|---|---|---|---|
| 1 | ಮೈಸೂರು ಮಹಾನಗರ ಪಾಲಿಕೆ | 65 | 725 | 4,01,730 | 3,97,594 | 98 | 7,99,422 |
| 2 | ಶಿವಮೊಗ್ಗ ಮಹಾನಗರ ಪಾಲಿಕೆ | 35 | 288 | 1,35,524 | 1,38,673 | 21 | 2,74,218 |
| 3 | ತುಮಕೂರು ಮಹಾನಗರ ಪಾಲಿಕೆ | 35 | 271 | 1,28,882 | 1,30,597 | 34 | 2,59,513 |
| | ಒಟ್ಟು | **135** | **1,284** | **6,66,136** | **6,66,864** | **153** | **13,33,153** |

**ಚುನಾವಣಾ ವೀಕ್ಷಕರ ನೇಮಕ:** ಮೇಲ್ಕಂಡ ಮಹಾನಗರಪಾಲಿಕೆಗಳ ಚುನಾವಣೆಗೆ ಒಟ್ಟು 3 ಐ.ಎ.ಎಸ್ ಅಧಿಕಾರಿಗಳನ್ನು **ವಿಶೇಷ ವೀಕ್ಷಕರನ್ನಾಗಿ**, 4 ಕೆ.ಎ.ಎಸ್. (ಹಿರಿಯ ಶ್ರೇಣಿ)ಯ ಅಧಿಕಾರಿಗಳನ್ನು **ಸಾಮಾನ್ಯ ವೀಕ್ಷಕರನ್ನಾಗಿ** ಹಾಗೂ 7 **ಕರ್ನಾಟಕ ರಾಜ್ಯ ಲೆಕ್ಕ ಪರಿಶೋಧನೆ** ಮತ್ತು ಲೆಕ್ಕಪತ್ರ ಇಲಾಖೆಯ ಜಂಟಿ ನಿಯಂತ್ರಕರು ಮತ್ತು ಉಪ ನಿಯಂತ್ರಕರನ್ನು ಚುನಾವಣಾ ವೆಚ್ಚ ವೀಕ್ಷಕರನ್ನಾಗಿಯೂ ನೇಮಕಾತಿ ಮಾಡಲಾಗಿದೆ.

**ಮತಯಂತ್ರಗಳ (ಇ.ವಿ.ಎಂ) ಬಳಕೆ:** ಮತಯಂತ್ರಗಳನ್ನು ಬಳಸಿ ಈ ಚುನಾವಣೆಯನ್ನು ನಡೆಸಲಾಗುತ್ತಿದೆ. ಚುನಾವಣೆ ನಡೆಯುತ್ತಿರುವ 3 ಮಹಾನಗರ ಪಾಲಿಕೆಗಳ ಚುನಾವಣೆಗಾಗಿ ಒಟ್ಟು 1,534 ಬ್ಯಾಲೆಟ್ ಯೂನಿಟ್‌ಗಳನ್ನು ಹಾಗೂ 1,534 ಕಂಟ್ರೋಲ್ ಯೂನಿಟ್‌ಗಳನ್ನು ಸಿದ್ಧಗೊಳಿಸಲಾಗಿರುತ್ತದೆ.

**ಅಭ್ಯರ್ಥಿಗಳ ಚುನಾವಣಾ ವೆಚ್ಚಮಿತಿ:** ಸರ್ಕಾರದ ಅಧಿಸೂಚನೆ No.: UDD:183:MLR:2009, Bengaluru, dated: 03-10-2009 ರಲ್ಲಿ ಅಭ್ಯರ್ಥಿಗಳ ಚುನಾವಣಾ ವೆಚ್ಚದ ಗರಿಷ್ಠ ಮಿತಿಯು ಈ ಕೆಳಕಂಡತಿರುತ್ತದೆ.

| ಕ್ರ ಸಂ. | ನಗರ ಸ್ಥಳೀಯ ಸಂಸ್ಥೆಗಳು | ವೆಚ್ಚಮಿತಿ (ರೂ. ಲಕ್ಷಗಳಲ್ಲಿ) |
|---|---|---|
| 1 | ಮಹಾನಗರ ಪಾಲಿಕೆ (ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಹೊರತುಪಡಿಸಿ) | 3.00 |

**ವಿಶೇಷ ಕ್ರಮಗಳು:**

➢ **NOTA:** ರಾಜ್ಯ ಚುನಾವಣಾ ಆಯೋಗವು ಮಹಾನಗರ ಪಾಲಿಕೆಯ ಮತದಾರರ ಪಟ್ಟಿಯಲ್ಲಿ ತನ್ನ ಹೆಸರು ಇರುವ ವ್ಯಕ್ತಿಯು, ತನ್ನ ಇಚ್ಛೆಯಂತೆ, "ಯಾರೊಬ್ಬರಿಗೂ ತನ್ನ ಮತ ನೀಡಲು ಇಚ್ಛೆ ಇರುವುದಿಲ್ಲ"ಎಂಬ ತನ್ನ ತೀರ್ಮಾನವನ್ನು ರಹಸ್ಯವಾಗಿ ಮತ ಚಲಾಯಿಸುವ ಮೂಲಕ ವ್ಯಕ್ತಪಡಿಸಲು ಅನುಕೂಲವಾಗುವಂತೆ ಮತಪತ್ರದ ಕೊನೆಯ ಪ್ಯಾನಲ್‌ನಲ್ಲಿ "NOTA" / "ಮೇಲ್ಕಂಡ ಯಾರೂ ಅಲ್ಲ" ಎಂದು ಮುದ್ರಿಸಲಾಗಿರುತ್ತದೆ.

➢ **ಭಾವಚಿತ್ರವಿರುವ ಮತಪತ್ರ:** ಮಹಾನಗರ ಪಾಲಿಕೆಯ ಚುನಾವಣೆಯಲ್ಲಿ ಒಂದೇ ವಾರ್ಡಿನಲ್ಲಿ ಒಂದೇ ಹೆಸರಿನ ಅಭ್ಯರ್ಥಿಗಳು ಸ್ಪರ್ಧಿಸುವ ಸಂದರ್ಭಗಳಿರುವುದರಿಂದ, ಅಭ್ಯರ್ಥಿಗಳನ್ನು ಗುರುತಿಸಲು ಮತಪತ್ರದಲ್ಲಿ ಅವರ ಹೆಸರಿನ ಮುಂದೆ ಅವರ ವೃತ್ತಿ ಅಥವಾ ವಿಳಾಸ ಇತ್ಯಾದಿಗಳನ್ನು ತೋರಿಸಲಾಗುತ್ತಿತ್ತು ಆದರೂ ಸಹ ಮತದಾರನಿಗೆ ಗೊಂದಲ ಉಂಟಾಗುವುದನ್ನು ತಪ್ಪಿಸಲು ಮತಪತ್ರದಲ್ಲಿ ಎಲ್ಲಾ ಅಭ್ಯರ್ಥಿಗಳ ಹೆಸರಿನ ಮುಂದೆ ಅವರ ಇತ್ತೀಚಿನ ಭಾವಚಿತ್ರ ಮುದ್ರಿಸುವಂತೆ ಕ್ರಮ ಕೈಗೊಳ್ಳಲಾಗಿದೆ.

➢ **ಪರಿಷ್ಕೃತ ಪ್ರಮಾಣಪತ್ರ:** ಮತದಾರನಿಗೆ ಅಭ್ಯರ್ಥಿಯ ಪೂರ್ವಾಪರಗಳನ್ನು ತಿಳಿದುಕೊಳ್ಳಲು ಸ್ಪರ್ಧಿಸುವ ಪ್ರತಿಯೊಬ್ಬ ಅಭ್ಯರ್ಥಿಯು ತನ್ನ ಹಿನ್ನೆಲೆ, ಚರಾಸ್ತಿ ಮತ್ತು ಸ್ಥಿರಾಸ್ತಿಗಳ ವಿವರಗಳು ಇರುವ ಪ್ರಮಾಣ ಪತ್ರವನ್ನು ಸಲ್ಲಿಸಬೇಕಾಗಿತ್ತು ಈಗ ಅದರೊಂದಿಗೆ ತನ್ನ ಸ್ವವಿವರ ವಿದ್ಯಾರ್ಹತೆ ಆದಾಯದ ಮೂಲಗಳನ್ನು ತಿಳಿಸಲು ಪರಿಷ್ಕೃತ ನಮೂನೆಯಲ್ಲಿ ಪ್ರಮಾಣ ಪತ್ರ (Affidavit) ಸಲ್ಲಿಸಬೇಕಾಗಿರುತ್ತದೆ.

➢ **ಭಾವಚಿತ್ರವಿರುವ ಮತದಾರರ ಚೀಟಿ:** ಚುನಾವಣೆಯಲ್ಲಿ ಮತದಾರರ ಪಟ್ಟಿಯಲ್ಲಿ ಹೆಸರಿರುವ ಪ್ರತಿಯೊಬ್ಬ ಮತದಾರನಿಗೆ ಅವರ ವಾರ್ಡಿನ ಸಂಖ್ಯೆ, ಮತದಾರರ ಪಟ್ಟಿಯ ಭಾಗದ ಸಂಖ್ಯೆ, ಮತದಾರರ ಪಟ್ಟಿ ಕ್ರಮ ಸಂಖ್ಯೆ, ಮತಗಟ್ಟೆಯ ಸಂಖ್ಯೆ ಮತ್ತು ಹೆಸರು/ವಿಳಾಸ, ಮತದಾನದ ದಿನಾಂಕ, ಮತದಾನದ ಸಮಯ, ಇತ್ಯಾದಿ ಮಾಹಿತಿಗಳಿರುವ **"ಭಾವಚಿತ್ರವಿರುವ ಮತದಾರರ ಚೀಟಿ"** ಯನ್ನು ನೀಡಲು ಉದ್ದೇಶಿಸಿದ್ದು, ಜಿಲ್ಲಾ ಚುನಾವಣಾಧಿಕಾರಿಗಳು ಈ ಮತದಾರರ ಚೀಟಿಗಳನ್ನು ಮುದ್ರಿಸಿ ಬಿ.ಎಲ್.ಒ.ಗಳ ಮೂಲಕ ಸಂಬಂಧಪಟ್ಟ ಮತದಾರರಿಗೆ ವಿತರಣೆ ಮಾಡಲು ತಿಳಿಸಿದೆ.

**ಕಾನೂನು ಮತ್ತು ಸುವ್ಯವಸ್ಥೆ:** ಮಹಾನಗರ ಪಾಲಿಕೆಯ ಸಾರ್ವತ್ರಿಕ ಚುನಾವಣೆಯ ಬಂದೋಬಸ್ತ್ ಹಾಗೂ ಕಾನೂನು ಸುವ್ಯವಸ್ಥೆಯನ್ನು ನೋಡಿಕೊಳ್ಳಲು ರಾಜ್ಯ ಪೋಲಿಸ್ ಇಲಾಖೆಯ ಸಹಕಾರವನ್ನು ಪಡೆದುಕೊಳ್ಳಲಾಗುತ್ತಿದೆ.

**ಚುನಾವಣಾ ಅಧಿಸೂಚನೆ:** ಸಂಬಂಧಪಟ್ಟ ಜಿಲ್ಲಾಧಿಕಾರಿಗಳು ಆಯೋಗವು ಆದೇಶಿಸಿದ ಚುನಾವಣಾ ವೇಳಾಪಟ್ಟಿಯನ್ನು ಅನುಸರಿಸಿ, ಮಹಾನಗರ ಪಾಲಿಕೆಗಳಿಗೆ ಸಂಬಂಧಿಸಿದಂತೆ ಕರ್ನಾಟಕ ಪೌರನಿಗಮಗಳ (ಚುನಾವಣೆ) ನಿಯಮಗಳು, 1979ರ ನಿಯಮ 10 ರಂತೆ, ಚುನಾವಣಾ ಅಧಿಸೂಚನೆಯನ್ನು ಹೊರಡಿಸುತ್ತಾರೆ.

ರಾಜ್ಯ ಚುನಾವಣಾ ಆಯೋಗವು ಮೇಲ್ಕಂಡ ಮೂರು ಮಹಾನಗರ ಪಾಲಿಕೆಗಳ ಸಾರ್ವತ್ರಿಕ ಚುನಾವಣೆಯನ್ನು ಶಾಂತಿ ಮತ್ತು ಸುವ್ಯವಸ್ಥೆಯಿಂದ ನಡೆಸಲು ಎಲ್ಲಾ ರಾಜಕೀಯ ಪಕ್ಷಗಳು, ಅಭ್ಯರ್ಥಿಗಳು ಹಾಗೂ ಸಾರ್ವಜನಿಕರು ಸಹಕಾರ ನೀಡುವಂತೆ ಕೋರಲಾಗಿದೆ.

ಈ ಬಗ್ಗೆ ಶ್ರವಣ ಮತ್ತು ದೃಶ್ಯ ಮಾಧ್ಯಮದಲ್ಲಿ ವ್ಯಾಪಕ ಪ್ರಚಾರ ನೀಡಿ ಸಹಕರಿಸುವಂತೆ ಕೋರಲಾಗಿದೆ.

ಅರ್ಚನ-ಎಂ.ಎಸ್
(ಅರ್ಚನ ಎಂ.ಎಸ್) 9/8/2018
ಅಧೀನ ಕಾರ್ಯದರ್ಶಿ,
ರಾಜ್ಯ ಚುನಾವಣಾ ಆಯೋಗ, ಕರ್ನಾಟಕ.

ಇವರಿಗೆ:

1. ನಿರ್ದೇಶಕರು, ವಾರ್ತಾ ಮತ್ತು ಪ್ರಚಾರ ಇಲಾಖೆ, ಬೆಂಗಳೂರು ಇವರಿಗೆ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
2. ವ್ಯವಸ್ಥಾಪಕರು, ದಿನಪತ್ರಿಕೆ/ ದೂರ ದರ್ಶನ ಪ್ರಸಾರ ವಾಹಿನಿಗಳಿಗೆ ಕಳುಹಿಸಿ, ಸುದ್ದಿ ಮಾಧ್ಯಮದಲ್ಲಿ ಪ್ರಕಟಿಸುವಂತೆ ಕೋರಿದೆ.